# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/ /2021-22 ದಿನಾಂಕ : 19/02/2022

## ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 19/02/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಕು॥ ಧನಲಕ್ಷ್ಮಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
4. ಶ್ರೀ ಮುತ್ತುರಾಜು ಕೆ.ಪಿ, ಅರಣ್ಯ ವಲಯ
5. ಶ್ರೀ ಪಿ.ಎಂ ಮಲಯಾದ್ರಿ, ಕೆಲಸ ಪರಿವೀಕ್ಷಕರು, ತೋಟಗಾರಿಕೆ
6. ಶ್ರೀ ಭಾರ್ಗವ ಪಿ.ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು.

**ನೋಡೆಲ್ ಅಧಿಕಾರಿ** ರವರು ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು**

ಹೆಚ್.ಎಂ.ಟಿ ಲೇಔಟ್, ಬಿ.ಇ.ಎಲ್ ಲೇಔಟ್, ದುರ್ಗಾ ಲೇಔಟ್, ಕೆನರಾ ಬ್ಯಾಂಕ್ ಲೇಔಟ್, ಸಪ್ತಗಿರಿ ಲೇಔಟ್, ಗುರುದರ್ಶನ್ ಲೇಔಟ್, ವೆಂಕಟಸ್ವಾಮಪ್ಪ ಲೇಔಟ್ ಹಾಗೂ ಇತರೆ ಕಡೆಗಳಲ್ಲಿ ಒಣತ್ಯಾಜ್ಯ ಸಂಗ್ರಹಣೆ ಸಮರ್ಪಕವಾಗಿರುವುದಿಲ್ಲ, ರಸ್ತೆ ಗುಡಿಸುವಿಕೆ ಕಾರ್ಯ ಸಮರ್ಪಕವಾಗಿರುವುದಿಲ್ಲ ಹಾಗೂ ಬ್ಲಾಕ್‌ಸ್ಪಾಟ್‌ಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಬ್ಲಾಕ್‌ಸ್ಪಾಟ್‌ಗಳ ಸಂಖ್ಯೆ ಕಡಿಮೆ ಮಾಡಲು ಕೋರಿದರು.

**ಕ್ರಮ: ಸ.ಕಾ.ಅ, ಘ.ತ್ಯಾ.ನಿ**

ಬಿ.ಇ.ಎಲ್ ಬಡಾವಣೆಯಲ್ಲಿ ನೀರಿನ ಪೂರೈಕೆಯಲ್ಲಿ ಅಸ್ತವ್ಯಸ್ತವಾಗಿದ್ದು, ಬಿಡಬ್ಲ್ಯೂಎಸ್ಎಸ್‌ಬಿ ರವರನ್ನು ವಿಚಾರಿಸಲಾಗಿ ಮೋಟಾರ್ ಹಾಳಾಗಿರುವುದಾಗಿ ತಿಳಿದು ಬಂದಿರುತ್ತದೆ. ಮೋಟಾರ್‌ನ ದುರಸ್ಥಿ ಕಾರ್ಯದ ನಂತರ ನೀರನ್ನು ಸರಬರಾಜು ಮಾಡದೆ ಇರುವುದರಿಂದ ಬಡಾವಣೆಯ ನಿವಾಸಿಗಳಿಗೆ ತುಂಬಾ ತೊಂದರೆ ಉಂಟಾಗುತ್ತಿದ್ದು, ಸಮರ್ಪಕವಾಗಿ ನೀರನ್ನು ಪೂರೈಸಲು ಕೋರಿದರು.

ಕ್ರಮ: ಸಕಾಅ ಬಿಡಬ್ಲ್ಯೂಎಸ್ಎಸ್‌ಬಿ

ಕೊಡಿಗೆಹಳ್ಳಿ, ತಿಂಡ್ಲು, ಮುನಿಸ್ವಾಮಪ್ಪ ಬಡಾವಣೆ, ಟೆಲಿಕಾಂ ಬಡಾವಣೆ, ಸಪ್ತಗಿರಿ ಬಡಾವಣೆ, ಜ್ಞಾನೇಶ್ವರಿ ಬಡಾವಣೆಗಳ ಚರಂಡಿಯಲ್ಲಿ ತುಂಬಿರುವ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಲು ಹಾಗೂ ವಿದ್ಯಾರಣ್ಯಪುರ ಮುಖ್ಯ ರಸ್ತೆಯಲ್ಲಿ ಹೊಸದಾಗಿ ಡಾಂಬರೀಕರಣ ಕಾಮಗಾರಿ ನಿರ್ವಹಿಸಲು ಕೋರಿದರು.

**ಕ್ರಮ: ಸ.ಕಾ.ಅ, ವಿ.ಉ.ವಿ**

ವಿದ್ಯಾರಣ್ಯಪುರ ಮುಖ್ಯ ರಸ್ತೆ ಹಾಗೂ ಎನ್.ಟಿ.ಐ ಲೇಔಟ್ ರೈಲ್ವೇ ಪ್ಯಾರಲಲ್ ರಸ್ತೆಯ 2 ಕಡೆಗಳಲ್ಲಿ ವಾಹನಗಳ ನಿಲುಗಡೆಯಾಗುತ್ತಿರುವುದರಿಂದ ಟ್ರಾಫಿಕ್ ಹೆಚ್ಚಾಗುತ್ತಿದ್ದು ಸಂಚಾರ ನಿಯಂತ್ರಕರನ್ನು ನಿಯೋಜಿಸಲು ಹಾಗೂ ಹಳೇ ಪೋಸ್ಟ್ ಆಫೀಸ್ ರಸ್ತೆಯ ಜಂಕ್ಷನ್‌ನಲ್ಲಿ ಅಪಘಾತಗಳು ಹೆಚ್ಚಾಗುತ್ತಿರುವುದರಿಂದ ಹಾಗೂ ಎಂ.ಈ.ಎಸ್ ಕಾಲೇಜ್ ರಸ್ತೆಯಲ್ಲಿ ದ್ವಿಚಕ್ರ ವಾಹನಗಳ ವೇಗ ಚಾಲನೆ, ವ್ಹೀಲಿಂಗ್ ಮಾಡುತ್ತಿರುವುದರಿಂದ ಸಂಚಾರ ನಿಯಂತ್ರಕರನ್ನು ನಿಯೋಜಿಸಲು ಕೋರಿದರು.

**ಕ್ರಮ: ಯಲಹಂಕ ಟ್ರಾಫಿಕ್ ಸೆಲ್**

**ನೋಡೆಲ್ ಅಧಿಕಾರಿ:** ಶ್ರೀ ಶಿವಕುಮಾರ್ ಗೌಡರ್ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.